ಜಂಟಿ ನಿರ್ದೇಶಕರು (ನಗರ ಯೋಜನೆ-ಉತ್ತರ) ಸಂ. ../81/16-17 ದಿನಾಂಕ 08/2/17 ಬೆಂಗಳೂರು ಮಹಾನಗರ ಪಾಲಿಕೆ

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002

ಸಂಖ್ಯೆ: BBMP/Addl.Dir/JD North/LP/0014/2014-15 ದಿನಾಂಕ: 08–02–2017

## ಪ್ರಾರಂಭಿಕ ಪ್ರಮಾಣಪತ್ರ (ಭಾಗಶಃ)

ವಿಷಯ: ಆಸ್ತಿ ಸಂಖ್ಯೆ: 415, ಕೆ.ಆರ್.ಪುರಂ ಗ್ರಾಮ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ನಂ. 52, ಮಹದೇವಪುರ ವಲಯ, ಬೆಂಗಳೂರು, ಇಲ್ಲಿ ನಿರ್ಮಿಸುತ್ತಿರುವ ಟವರ್ – ಎ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ (ಭಾಗಶಃ) ನೀಡುವ ಬಗ್ಗೆ.

ಉಲ್ಲೇಖ: 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/ JDNORTH/LP/0014/2014-15 ದಿನಾಂಕ: 02–03–2015

2) ತಮ್ಮ ಮನವಿ ಪತ್ರ ದಿನಾಂಕ: 02–01–2017 ಮತ್ತು 18–01–2017

* * * * * * *

ಆಸ್ತಿ ಸಂಖ್ಯೆ. 415, ಕೆ.ಆರ್.ಪುರಂ ಗ್ರಾಮ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ನಂ. 52, ಮಹದೇವಪುರ ವಲಯ, ಬೆಂಗಳೂರು, ಇಲ್ಲಿ ಟವರ್ – ಎ ಮತ್ತು ಸಿ ರಲ್ಲಿ 2ತಳ + ನೆಲ + ಮೇಲಿನ 19 ಅಂತಸ್ತುಗಳು ಮತ್ತು ಟವರ್ – ಬಿ ರಲ್ಲಿ 2 ತಳ + ನೆಲ + ಮೇಲಿನ 20 ಅಂತಸ್ತುಗಳ ಒಟ್ಟು 391 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡ ನಿರ್ಮಿಸಲು ಉಲ್ಲೇಖ (1) ರಂತೆ ಈ ಕಛೇರಿಯಿಂದ ದಿನಾಂಕ: 02–03–2015 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಸದರಿ ಟವರ್ – ಎ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (2) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಾಣ ಪ್ರಾರಂಭಿಸಿದ್ದು, ಆರ್.ಸಿ.ಸಿ. ಸ್ಥಂಭಗಳನ್ನು ನಿರ್ಮಿಸಿರುವುದನ್ನು ಪರಿವೀಕ್ಷಿಸಲಾಗಿದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 25–01–2017 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರದ ಸಂಬಂಧ ಶುಲ್ಕ ರೂ. 1,23,000/– ಗಳಿಗೆ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: RE-ifms 331-TP/00578 ದಿನಾಂಕ: 07–02–2017 ರಂದು ಸಂದಾಯ ಮಾಡಿರುವುದರಿಂದ, ಸದರಿ ಟವರ್ – ಎ ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

**ಷರತ್ತುಗಳು**

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3. ನಕ್ಷೆ ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.
4. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

5. ವಿವಿಧ ಇಲಾಖೆಗಳಿಂದ ನೀಡಲಾಗಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ಷರತ್ತಿಗಳಿಗೆ ಬದ್ಧರಾಗಿರತಕ್ಕದ್ದು.
6. ಟವರ್ – ಎ ಕಟ್ಟಡದಲ್ಲಿ ತಳ + ನೆಲ + ಮೇಲಿನ 4 ಅಂತಸ್ತಿನವರೆಗೆ ಕಟ್ಟಡ ನಿರ್ಮಿಸತಕ್ಕದ್ದು, 5ನೇ ಅಂತಸ್ತಿನಿಂದ ಕಟ್ಟಡ ನಿರ್ಮಾಣ ಮಾಡುವ ಮೊದಲು ಹೆಚ್.ಎ.ಎಲ್.ಇಲಾಖೆಯಿಂದ ಪಡೆದಿರುವ ನಿರಾಕ್ಷೇಪಣಾ ಪತ್ರವನ್ನು ಸಲ್ಲಿಸುವುದು
7. ಉದ್ಯಾನವನ ಹಾಗೂ ಬಯಲು ಜಾಗದ ಶುಲ್ಕವನ್ನು ಪಾವತಿಸುವ ಸಂಬಂಧ ಘನ ಸರ್ವೋಚ್ಚ ನ್ಯಾಯಾಲಯ ಹಾಗೂ ಉಚ್ಚ ನ್ಯಾಯಾಲಯದ ಅಂತಿಮ ಆದೇಶಕ್ಕಾಗಿ ಬದ್ಧರಿರುವುದಾಗಿ ದಿನಾಂಕ: 08-02-2017 ರಂದು ಸಲ್ಲಿಸಿರುವ ಮುಚ್ಚಳಿಕೆ ಪತ್ರದಲ್ಲಿನ ಅಂಶಗಳಿಗೆ ಬದ್ಧರಿರತಕ್ಕದ್ದು
8. ಮಂಜೂರಾತಿ ನಕ್ಷೆಯನ್ವಯ ಟವರ್ – ಬಿ ಮತ್ತು ಸಿ ಕಟ್ಟಡಗಳ ಕಾಮಗಾರಿಯನ್ನು ಪ್ರಾರಂಭಿಸಿದ ನಂತರ, ಅರ್ಜಿ ಸಲ್ಲಿಸಿ ಪ್ರಾರಂಭಿಕ ಪ್ರಮಾಣಪತ್ರ ಪಡೆಯತಕ್ಕದ್ದು.

08/02/17

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

7/8/2/17 8/2/17 7/8/2/17

ಗೆ,
ಮೆ: ಮೊನಾರ್ಕ್ ಪ್ರಾಪರ್ಟೀಸ್,
4ನೇ ಮಹಡಿ, ಮೊನಾರ್ಕ್ ಪ್ಲಾಜಾ,
54, ಬ್ರಿಗೇಡ್ ರಸ್ತೆ,
ಬೆಂಗಳೂರು – 560001.

Housiey.com